# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್. ರವಿ ರವರು ನಿಯಮ-72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಉತ್ತರ

***

**ವಿಷಯ:** ಕರ್ನಾಟಕ ಜಾನಪದ ಪರಿಷತ್ತು ಮತ್ತು ಜಾನಪದ ಲೋಕ ಇಂದು ರಾಜ್ಯದಲ್ಲೇ ಒಂದು ಪ್ರತಿಷ್ಠಿತ ಸಾಂಸ್ಕೃತಿಕ ಸಂಸ್ಥೆಯಾಗಿ ಕಳೆದ 43 ವರ್ಷಗಳಿಂದ ನಮ್ಮ ನಾಡಿನ ಜಾನಪದ ಕಲೆ, ಸಾಹಿತ್ಯ, ಸಂಸ್ಕೃತಿ, ಜಾನಪದ ಗೀತಗಾಯನ, ಜಾನಪದ ಕ್ರೀಡೆ, ಜಾನಪದ ವಸ್ತು ಮತ್ತು ಪರಿಕರಗಳ ಸಂಗ್ರಹಣೆ, ಜಾನಪದ ಸಂಪ್ರದಾಯ ಮತ್ತು ಚಟುವಟಿಕೆಗಳನ್ನು ಸಂರಕ್ಷಿಸಿ ಮುನ್ನಡೆಸುವ ಮಹತ್ಕಾರ್ಯವನ್ನು ನಿರ್ವಹಿಸುತ್ತಿದೆ. ಆದರೆ, ಈ ಪರಿಷತ್ತಿನಲ್ಲಿ ಕಾರ್ಯನಿರ್ವಹಿಸುತ್ತಿರುವ 30 ಜನ ಹಂಗಾಮಿ/ಹೊರಗುತ್ತಿಗೆ ಸಿಬ್ಬಂದಿಗಳಿಗೆ ಪ್ರತ್ಯೇಕ ಹೆಡ್‌ನಲ್ಲಿ ವೇತನ ಪಾವತಿಸಲು ಪರಿಷತ್ತಿನ ಖಾತೆಗೆ ನೇರವಾಗಿ ಅನುದಾನ ಬಿಡುಗಡೆ ಮಾಡಲು ಸರ್ಕಾರವು ಕ್ರಮ ಕೈಗೊಳ್ಳದೇ ಇರುವುದರಿಂದ ಮತ್ತು 2022-23ನೇ ಸಾಲಿನ ವೇತನಾನುದಾನ ಇಲ್ಲಿಯವರೆಗೆ ಬಿಡುಗಡೆಯಾಗದೇ ಇರುವುದರಿಂದ ಇಲ್ಲಿನ ಸಿಬ್ಬಂದಿಗಳಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ.

**ಉತ್ತರ:** ಸರ್ಕಾರದ ಆದೇಶ ಸಂಖ್ಯೆ: ಸಂಕಇ 150 ಕಸಧ 96, ದಿ:14.01.2000ರನ್ವಯ ಕರ್ನಾಟಕ ಜಾನಪದ ಪರಿಷತ್ತು ಮತ್ತು ಜಾನಪದ ಲೋಕ ಇಲ್ಲಿಗೆ ಒಟ್ಟು 11 ಹುದ್ದೆಗಳು ಮಂಜೂರಾಗಿದ್ದು, ಮಂಜೂರಾದ 11 ಹುದ್ದೆಗಳನ್ನು ಭರ್ತಿ ಮಾಡಲಾಗಿತ್ತು, ಕಾಲಕ್ರಮೇಣ ನಿವೃತ್ತಿಯಾಗಿ ಪ್ರಸ್ತುತ ಇಬ್ಬರು ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. ಕರ್ನಾಟಕ ಜಾನಪದ ಪರಿಷತ್ತು ಮತ್ತು ಜಾನಪದ ಲೋಕಕ್ಕೆ ಪುನ: ಹುದ್ದೆಗಳನ್ನು ಭರ್ತಿ ಮಾಡಬೇಕಾದಲ್ಲಿ ಸರ್ಕಾರದ ಅನುಮತಿ ಪಡೆಯಲು ಆದೇಶದಲ್ಲಿ ಉಲ್ಲೇಖಿಸಲಾಗಿರುತ್ತದೆ.

ಈ ಮಧ್ಯೆ ಕರ್ನಾಟಕ ಜಾನಪದ ಪರಿಷತ್ತು ಮತ್ತು ಜಾನಪದ ಲೋಕರವರು ಸರ್ಕಾರದ ಆದೇಶವಿಲ್ಲದೆಯೇ ಒಟ್ಟು 30 ಜನ ಹಂಗಾಮಿ/ಹೊರಗುತ್ತಿಗೆ ಸಿಬ್ಬಂದಿಗಳನ್ನು ಭರ್ತಿ ಮಾಡಿಕೊಂಡಿದ್ದು, ಈ ಎಲ್ಲಾ ಹುದ್ದೆಗಳನ್ನು ಖಾಯಂ ಆಗಿ ನೇಮಕ ಮಾಡಿಕೊಳ್ಳುವಂತೆ ಕೋರಿರುತ್ತಾರೆ. ಈ ಕುರಿತು ಕೆಲವೊಂದು ಸ್ಪಷ್ಟೀಕರಣ ಕೋರಿ ಕರ್ನಾಟಕ ಜಾನಪದ ಪರಿಷತ್ತು ಮತ್ತು ಜಾನಪದ ಲೋಕರವರಿಗೆ ಪತ್ರ ಬರೆಯಲಾಗಿದ್ದು, ಸ್ಪಷ್ಟೀಕರಣ ಸ್ವೀಕೃತಿಗೊಂಡ ನಂತರ ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆದು ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು.

ಸಂಖ್ಯೆ: ಕಸಂವಾ 67 ಕವಿಸ 2022

**(ಸುನಿಲ್ ಕುಮಾರ್ ವಿ.)** 14/9

ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ
ಸಚಿವರು